1 CCE PR/NSR & NSPR(D)/900/7801

ಒಟ್ಟು ಮುದ್ರಿತ ಪುಟಗಳ ಸಂಖ್ಯೆ : 16 ]

Total No. of Printed Pages : 16 ]

ಒಟ್ಟು ಪ್ರಶ್ನೆಗಳ ಸಂಖ್ಯೆ : 59 ]

Total No. of Questions : 59 ]

**ಸಂಕೇತ ಸಂಖ್ಯೆ : 01-K**

**Code No. : 01-K**

**D**

**CCE PR**
**UNREVISED**
**REDUCED SYLLABUS**
**NSR & NSPR**

Question Paper Serial No. **900**

# ವಿಷಯ : ಪ್ರಥಮ ಭಾಷೆ — ಕನ್ನಡ

# Subject : First Language — KANNADA

**(ಪುನರಾವರ್ತಿತ ಖಾಸಗಿ ಅಭ್ಯರ್ಥಿ / ಎನ್.ಎಸ್.ಆರ್. & ಎನ್.ಎಸ್.ಪಿ.ಆರ್.)**

**(Private Repeater / NSR & NSPR)**

ದಿನಾಂಕ : 31. 03. 2023 ] [ Date : 31. 03. 2023

ಸಮಯ : ಬೆಳಗ್ಗೆ 10-30 ರಿಂದ ಮಧ್ಯಾಹ್ನ 1-45 ರವರೆಗೆ ] [ Time : 10-30 A.M. to 1-45 P.M.

ಗರಿಷ್ಠ ಅಂಕಗಳು : 125 ] [ Max. Marks : 125

***ಪರೀಕ್ಷಾರ್ಥಿಗಾಗಿ ಸಾಮಾನ್ಯ ಸೂಚನೆಗಳು :***

1. ಈ ಪ್ರಶ್ನೆಪತ್ರಿಕೆಯು ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಒಟ್ಟು 59 ಪ್ರಶ್ನೆಗಳನ್ನು ಹೊಂದಿದೆ.
2. ಈ ಪ್ರಶ್ನೆಪತ್ರಿಕೆಯನ್ನು ಹಿಮ್ಮುಖ ಜಾಕೆಟ್ ಮೂಲಕ ಮೊಹರು (ಸೀಲ್) ಮಾಡಲಾಗಿದೆ. ಪರೀಕ್ಷೆ ಪ್ರಾರಂಭವಾಗುವ ಸಮಯಕ್ಕೆ ನಿಮ್ಮ ಪ್ರಶ್ನೆಪತ್ರಿಕೆಯ ಬಲಬದಿ ಪಾರ್ಶ್ವವನ್ನು ಕತ್ತರಿಸಿ, ಪ್ರಶ್ನೆಪತ್ರಿಕೆಯಲ್ಲಿ ಎಲ್ಲಾ ಪುಟಗಳು ಇವೆಯೇ ಎಂದು ಪರೀಕ್ಷಿಸಿಕೊಳ್ಳಿ.
3. ವಸ್ತುನಿಷ್ಠ ಮತ್ತು ವಿಷಯನಿಷ್ಠ ಮಾದರಿಯ ಪ್ರಶ್ನೆಗಳಿಗೆ ಕೊಟ್ಟಿರುವ ಸೂಚನೆಗಳನ್ನು ಪಾಲಿಸಿ.
4. ಬಲ ಭಾಗದಲ್ಲಿ ಕೊಟ್ಟಿರುವ ಅಂಕಿಗಳು ಪ್ರಶ್ನೆಗಳಿಗಿರುವ ಪೂರ್ಣ ಅಂಕಗಳನ್ನು ತೋರಿಸುತ್ತವೆ.
5. ಪ್ರಶ್ನೆಪತ್ರಿಕೆಯನ್ನು ಓದಿಕೊಳ್ಳಲು 15 ನಿಮಿಷಗಳ ಕಾಲಾವಕಾಶವು ಸೇರಿದಂತೆ, ಉತ್ತರಿಸಲು ನಿಗದಿಪಡಿಸಲಾದ ಸಮಯವನ್ನು ಪ್ರಶ್ನೆಪತ್ರಿಕೆಯ ಮೇಲ್ಭಾಗದಲ್ಲಿ ನೀಡಲಾಗಿದೆ.

[ Turn over

ಇಲ್ಲಿಂದ ಕತ್ತರಿಸಿ

TEAR HERE TO OPEN THE QUESTION PAPER
ಪ್ರಶ್ನೆಪತ್ರಿಕೆಯನ್ನು ತೆರೆಯಲು ಇಲ್ಲಿ ಕತ್ತರಿಸಿ

Tear here

**I. ಕೆಳಗಿನ ಪ್ರಶ್ನೆಗಳಿಗೆ ಅಥವಾ ಅಪೂರ್ಣ ಹೇಳಿಕೆಗಳಿಗೆ ನಾಲ್ಕು ಆಯ್ಕೆಗಳನ್ನು ನೀಡಲಾಗಿದೆ. ಅವುಗಳಲ್ಲಿ ಸೂಕ್ತವಾದ ಉತ್ತರವನ್ನು ಆರಿಸಿ, ಕ್ರಮಾಕ್ಷರದೊಂದಿಗೆ ಬರೆಯಿರಿ : 10 × 1 = 10**

1. 'ದಿಗಂತ' ಪದವು ಈ ಸಂಧಿಗೆ ಉದಾಹರಣೆಯಾಗಿದೆ

   (ಎ) ಗುಣ ಸಂಧಿ

   (ಬಿ) ಜಶ್ತ್ವ ಸಂಧಿ

   (ಸಿ) ವೃದ್ಧಿ ಸಂಧಿ

   (ಡಿ) ಶ್ಚುತ್ವ ಸಂಧಿ

2. ಒಂದು ಪದವನ್ನೋ ವಾಕ್ಯವನ್ನೋ ಹೇಳಿ ಅದಕ್ಕೆ ಸಮನಾರ್ಥಕ ಪದವನ್ನೋ ವಾಕ್ಯವನ್ನೋ ಹೇಳುವಾಗ ಬಳಸುವ ಲೇಖನ ಚಿಹ್ನೆ

   (ಎ) ಉದ್ಧರಣ ಚಿಹ್ನೆ

   (ಬಿ) ವಾಕ್ಯವೇಷ್ಟನ ಚಿಹ್ನೆ

   (ಸಿ) ಆವರಣ ಚಿಹ್ನೆ

   (ಡಿ) ವಿವರಣಾತ್ಮಕ ಚಿಹ್ನೆ

3. 'ಬೆಟ್ಟದಾವರೆ' ಪದವು ಈ ಸಮಾಸಕ್ಕೆ ಉದಾಹರಣೆಯಾಗಿದೆ

(ಎ) ತತ್ಪುರುಷ ಸಮಾಸ

(ಬಿ) ದ್ವಿಗು ಸಮಾಸ

(ಸಿ) ಅಂಶಿ ಸಮಾಸ

(ಡಿ) ಕ್ರಿಯಾ ಸಮಾಸ

4. 'ಮಾಡು' ಧಾತುವಿನ ವಿಧ್ಯರ್ಥಕ ರೂಪ

(ಎ) ಮಾಡೇವು

(ಬಿ) ಮಾಡಿಯಾರು

(ಸಿ) ಮಾಡರು

(ಡಿ) ಮಾಡಲಿ

5. 'ಸಾವಿತ್ರಿಗೆ' ಈ ಪದದಲ್ಲಿರುವ ವಿಭಕ್ತಿ

(ಎ) ಪ್ರಥಮಾ

(ಬಿ) ದ್ವಿತೀಯಾ

(ಸಿ) ತೃತೀಯಾ

(ಡಿ) ಚತುರ್ಥೀ

6. 'ಧಗಧಗ' ಪದವು ಈ ಅವ್ಯಯಕ್ಕೆ ಸೇರಿದೆ

(ಎ) ಸಾಮಾನ್ಯಾರ್ಥಕಾವ್ಯಯ

(ಬಿ) ಅನುಕರಣಾವ್ಯಯ

(ಸಿ) ಭಾವಸೂಚಕಾವ್ಯಯ

(ಡಿ) ಕ್ರಿಯಾರ್ಥಕಾವ್ಯಯ

1

7. ‘ಚಂದ್ರನಂತೆ’ ಪದವು ಈ ವ್ಯಾಕರಣಾಂಶಕ್ಕೆ ಸೇರಿದೆ

(ಎ) ತದ್ಧಿತಾಂತಭಾವನಾಮ

(ಬಿ) ತದ್ಧಿತಾಂತಾವ್ಯಯ

(ಸಿ) ಕೃದಂತನಾಮ

(ಡಿ) ಕೃದಂತಭಾವನಾಮ

8. ಅಕರ್ಮಕ ಧಾತುವಿಗೆ ಉದಾಹರಣೆಯಿದು

(ಎ) ಕೊಡು

(ಬಿ) ಬಿಡು

(ಸಿ) ತಿದ್ದು

(ಡಿ) ಬದುಕು

9. ಒಂದು ಅಥವಾ ಅನೇಕ ವಾಕ್ಯಗಳು ಒಂದು ಪ್ರಧಾನ ವಾಕ್ಯಕ್ಕೆ ಅಧೀನಗಳಾಗಿದ್ದರೆ ಅದು

(ಎ) ಸಾಮಾನ್ಯ ವಾಕ್ಯ

(ಬಿ) ಸಂಯೋಜಿತ ವಾಕ್ಯ

(ಸಿ) ಮಿಶ್ರವಾಕ್ಯ

(ಡಿ) ಪ್ರಶ್ನಾರ್ಥಕ ವಾಕ್ಯ

10. ಗುರು–ಲಘು ಮೂರಿರೆ ಇದು

(ಎ) ಮನ ಗಣ

(ಬಿ) ಭಯ ಗಣ

(ಸಿ) ಜರ ಗಣ

(ಡಿ) ಸತ ಗಣ

1

**II. ಕೆಳಗಿನವುಗಳಲ್ಲಿ ಮೊದಲೆರಡು ಪದಗಳಿಗಿರುವ ಸಂಬಂಧದಂತೆ ಮೂರನೆಯ ಪದಕ್ಕೆ ಸರಿ ಹೊಂದುವ ಸಂಬಂಧೀ ಪದವನ್ನು ಬರೆಯಿರಿ : 5 × 1 = 5**

11. ವರ್ಗೀಯ ವ್ಯಂಜನಾಕ್ಷರಗಳು : ೨೫ :: ಅವರ್ಗೀಯ ವ್ಯಂಜನಾಕ್ಷರಗಳು : .............. .

12. ಹಾಲ್ಜೇನು : ಜೋಡುನುಡಿ :: ಬೇಡಬೇಡ : ......................... .

13. ಪರ್ವತ : ರೂಢನಾಮ :: ಧರ್ಮರಾಯ : ......................... .

14. ಮ್ಯಾಗ : ಮೇಲೆ :: ಸಕ್ಕಾರಿ : .................. .

15. ತಿನ್ನುತ್ತೇನೆ : ವರ್ತಮಾನಕಾಲ :: ತಿಂದೆನು : ......................... .

**III. ಕೆಳಗಿನ ಪ್ರತಿಯೊಂದು ಪ್ರಶ್ನೆಗಳಿಗೆ ಒಂದೊಂದು ವಾಕ್ಯದಲ್ಲಿ ಉತ್ತರ ಬರೆಯಿರಿ : 8 × 1 = 8**

16. ಗಡಿ ಪ್ರದೇಶಗಳಲ್ಲಿ 'ಬ್ಲಾಕ್ ಔಟ್' ನಿಯಮವನ್ನು ಏತಕ್ಕಾಗಿ ಪಾಲಿಸಲಾಗುತ್ತದೆ ?

17. ಮತಂಗಾಶ್ರಮದಲ್ಲಿ ವಾಸವಿದ್ದ ತಪಸ್ವಿನಿ ಯಾರು ?

18. ದೇವನೂರ ಮಹಾದೇವ ಅವರಿಗೆ ಮನೆಮಂಚಮ್ಮನ ಕತೆ ಹೇಳಿದ ಕವಿ ಯಾರು ?

19. ಧರ್ಮಬುದ್ಧಿಯು ತನ್ನ ಬೆಳಗಿನ ಹೊತ್ತನ್ನು ಹೇಗೆ ಕಳೆದನು ?

20. ಹಕ್ಕಿಯ ಕಣ್ಣುಗಳು ಯಾವುವು ?

21. ಯಜ್ಞಾಶ್ವವನ್ನು ಕಟ್ಟಿದವರು ಯಾರು ?

22. ವಿವೇಕಾನಂದರನ್ನು 'ಮಾನವತಾಮಿತ್ರ'ರೆಂದು ಕರೆದವರಾರು ?

23. ಒಡೆಯನ ಅಂಗಳದಲ್ಲಿ ಮಾವಿನ ಮರಗಳು ಹೇಗೆ ಬೆಳೆದು ನಿಂತಿವೆ ?

**IV. ಕೆಳಗಿನ ಪ್ರಶ್ನೆಗಳಿಗೆ ಮೂರು ಅಥವಾ ನಾಲ್ಕು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 15 × 2 = 30**

24. ಮಹಿಳೆಯ ಆರ್ತನಾದ ಕೇಳಿ ರಾಹಿಲನ ಮನದಲ್ಲಿ ಮೂಡಿದ ಪ್ರಶ್ನೆಗಳಾವುವು ?

25. ಮುದುಕಿಯು ರಾಹಿಲನ ಬಳಿ ಯುದ್ಧದ ಬಗ್ಗೆ ತಿರಸ್ಕಾರದಿಂದ ನುಡಿದ ಮಾತುಗಳಾವುವು ?

26. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಯಾವ ಕ್ಷೇತ್ರಗಳು ಸ್ವಯಂ ಆಡಳಿತ ಕ್ಷೇತ್ರಗಳಾದವು ?

27. ವಚನಕಾರರ ದೃಷ್ಟಿಯಲ್ಲಿ ಅರಿವು ಎಂದರೇನು ? ವಿವರಿಸಿ.

28. ಮದಲಿಂಗನ ಕಣಿವೆಯಲ್ಲಿ ಬರುವಾಗ ಶಾನುಭೋಗರು ಏನೆಂದು ಯೋಚಿಸಿದರು ?

29. ದುಷ್ಟಬುದ್ಧಿಯು ತನ್ನ ತಂದೆಗೆ ಏಕಾಂತದಲ್ಲಿ ಏನೆಂದು ಹೇಳಿದನು ?

30. ಹಲಗಲಿಯ ಬೇಡರು ದಂಗೆ ಏಳಲು ಕಾರಣವೇನು ?

31. ಕೃಷ್ಣನು ಆಮಿಷಗಳನ್ನು ಒಡ್ಡಿದಾಗ ಕರ್ಣನ ಮನದಲ್ಲಿ ಮೂಡಿದ ಭಾವನೆಗಳೇನು ?

32. ತಾನು ಹೋರಾಡುತ್ತಿರುವುದು ನೆಲಕ್ಕಲ್ಲ ಛಲಕ್ಕೆ ಎಂಬುದನ್ನು ದುರ್ಯೋಧನ ಹೇಗೆ ವಿವರಿಸಿದ್ದಾನೆ ?

33. ಪಾರ್ಥ–ಭೀಮರ ಬಗೆಗೆ ದುರ್ಯೋಧನನ ಅಭಿಪ್ರಾಯವೇನು ?

34. ಕುದುರೆಯನ್ನು ಕಟ್ಟುವ ವಿಚಾರದಲ್ಲಿ ಮುನಿಸುತರಿಗೂ ಲವನಿಗೂ ನಡೆದ ಸಂವಾದವನ್ನು ಬರೆಯಿರಿ.

35. ಜಾತಿ ವ್ಯವಸ್ಥೆಯ ಬಗ್ಗೆ ವಿವೇಕಾನಂದರ ಅಭಿಪ್ರಾಯವೇನು ?

36. 'ವಸಂತ ಮುಖ ತೋರಲಿಲ್ಲ' ಕವನದಲ್ಲಿ ಪ್ರಕೃತಿಯ ಸಂಭ್ರಮ ಹೇಗೆ ವ್ಯಕ್ತವಾಗಿದೆ ?

37. ಭಗತ್‌ಸಿಂಗ್ ತನ್ನ ಸಹಚರರೊಂದಿಗೆ ವೀರಯೋಧನಾಗಿ ಹೇಗೆ ಅಮರನಾದನು ?

38. ಹೊಲದಲ್ಲಿ ಹುಟ್ಟಿದ ಗರಿಕೆ ಕೊಡುವ ತೊಂದರೆಯನ್ನು ಒಗಟು ಹೇಗೆ ವಿವರಿಸುತ್ತದೆ ?

**V.** **ಕೆಳಗಿನ ಕವಿಗಳ / ಸಾಹಿತಿಗಳ ಜನ್ಮಸ್ಥಳ, ಕಾಲ, ಕೃತಿ ಮತ್ತು ಬಿರುದು / ಪ್ರಶಸ್ತಿಗಳನ್ನು ಕುರಿತು ವಾಕ್ಯರೂಪದಲ್ಲಿ ಬರೆಯಿರಿ :** **4 × 3 = 12**

39. ಪು.ತಿ. ನರಸಿಂಹಾಚಾರ್

40. ದೇವನೂರ ಮಹಾದೇವ

41. ಜಿ.ಎಸ್. ಶಿವರುದ್ರಪ್ಪ

42. ರನ್ನ

**VI.** **ಕೆಳಗಿನ ಪದ್ಯಭಾಗಕ್ಕೆ ಪ್ರಸ್ತಾರ ಹಾಕಿ, ಗಣ ವಿಭಾಗ ಮಾಡಿ, ಛಂದಸ್ಸಿನ ಹೆಸರನ್ನು ಬರೆಯಿರಿ :** **1 × 3 = 3**

43. ಅತಿಕುಟಿಲಮನಂ ಧನಲು

ಬ್ಧತೆಯಿಂದಂ ದುಷ್ಟಬುದ್ಧಿ ನುಡಿದಂ ಪುಸಿಯಂ

**VII.** **ಕೆಳಗಿನ ವಾಕ್ಯದಲ್ಲಿರುವ ಅಲಂಕಾರವನ್ನು ಹೆಸರಿಸಿ, ಲಕ್ಷಣ ಬರೆದು, ಸಮನ್ವಯಗೊಳಿಸಿ :** **1 × 3 = 3**

44. "ಬಾನಿನಲ್ಲಿ ಗಾಳಿಪಟಗಳು ಹಕ್ಕಿಗಳಂತೆ ಹಾರಾಡುತ್ತಿದ್ದವು"

**VIII.** **ಕೆಳಗಿನ ಗಾದೆಗಳಲ್ಲಿ ಯಾವುದಾದರೂ ಎರಡನ್ನು ಗಾದೆಯ ಮಹತ್ವದೊಂದಿಗೆ ವಿಸ್ತರಿಸಿ ಬರೆಯಿರಿ :** **2 × 3 = 6**

45. ಕಟ್ಟುವುದು ಕಠಿಣ; ಕೆಡಹುವುದು ಸುಲಭ.

**ಅಥವಾ**

ಮಾಡಿದ್ದುಣ್ಣೋ ಮಾರಾಯ.

46. ಮನಸ್ಸಿದ್ದರೆ ಮಾರ್ಗ.

**ಅಥವಾ**

ಶಕ್ತಿಗಿಂತ ಯುಕ್ತಿ ಮೇಲು.

**IX. ಕೆಳಗಿನ ವಾಕ್ಯ ಅಥವಾ ಹೇಳಿಕೆಗಳಿಗೆ ಸಂದರ್ಭ ಮತ್ತು ಸ್ವಾರಸ್ಯಗಳನ್ನು ಬರೆಯಿರಿ : 6 × 3 = 18**

47. "ರಾಮನೇ ಧೈರ್ಯಗೆಡೆ ಸ್ಥೈರ್ಯಕೆಡೆಯಾರು ?"

48. "ನಾನು ಮುಖ ಮೇಲಾಗಿ ಬಿದ್ದಿದ್ದೆನೆ ?"

49. "ಪೊನ್ನನೆಲ್ಲಮಂ ನೀನೆ ಕೊಂಡೆ"

50. "ಮಂಗಳ ಲೋಕದ ಅಂಗಳಕೇರಿ"

51. "ಬೆನ್ನಬೆನ್ನತ್ತಿ ತಿರಿತಿರ್ವಿ ಕಡಿದರೂ ಏನು ಉಳಿಯದ್ದಂಗ"

52. "ತನ್ನ ಮಾತೆಯಂ ಸರ್ವಜನಮುಂ ಬಂಜೆಯೆನ್ನದಿರ್ದಪುದೆ"

**X. ಕೆಳಗಿನ ಪದ್ಯಭಾಗವನ್ನು ಪೂರ್ಣಗೊಳಿಸಿ ಬರೆಯಿರಿ :** **1 × 4 = 4**

53. ಹಸುರಾಗಸ; ......................................................

..........................................................................

..........................................................................

........................................................ ಬಿಸಿಲೂ!

**ಅಥವಾ**

ಹೊಸ ಹೂವಿನ ....................................................

..........................................................................

..........................................................................

...................................................... ಯುಸಿರೂ!

**XI. ಕೆಳಗಿನ ಪದ್ಯಭಾಗವನ್ನು ಓದಿ ಅರ್ಥಮಾಡಿಕೊಂಡು, ಅಡಕವಾಗಿರುವ ಮೌಲ್ಯವನ್ನಾಧರಿಸಿ ಸಾರಾಂಶ ಬರೆಯಿರಿ :** **1 × 4 = 4**

54. ಮರುಳು ಮಾಧವ ಮಹಿಯ ರಾಜ್ಯದ
ಸಿರಿಗೆ ಸೋಲುವನಲ್ಲ ಕೌಂತೇ
ಯರು ಸುಯೋಧನರೆನಗೆ ಬೆಸಕೈವಲ್ಲಿ ಮನವಿಲ್ಲ
ಹೊರೆದ ದಾತಾರಂಗೆ ಹಗೆವರ
ಶಿರವನರಿದೊಪ್ಪಿಸುವೆನೆಂಬೀ
ಭರದೊಳಿರ್ದೆನು ಕೌರವೇಂದ್ರನ ಕೊಂದೆ ನೀನೆಂದ

**XII. ಕೆಳಗಿನ ಪ್ರಶ್ನೆಗಳಿಗೆ ಎಂಟು ಅಥವಾ ಹತ್ತು ವಾಕ್ಯಗಳಲ್ಲಿ ಉತ್ತರ ಬರೆಯಿರಿ : 2 × 4 = 8**

55. ನಾಲ್ವಡಿ ಕೃಷ್ಣರಾಜ ಒಡೆಯರ ಕಾಲದಲ್ಲಿ ಕಾರ್ಯ ನಿರ್ವಹಿಸುತ್ತಿದ್ದ 'ಪ್ರಜಾಪ್ರತಿನಿಧಿ ಸಭೆ' ಹಾಗೂ 'ನ್ಯಾಯ ವಿಧಾಯಕ ಸಭೆ'ಯನ್ನು ಕುರಿತು ಬರೆಯಿರಿ.

**ಅಥವಾ**

ಶಿಕ್ಷಣ ಕ್ಷೇತ್ರಕ್ಕೆ ವಿಶ್ವೇಶ್ವರಯ್ಯ ಅವರು ಸಲ್ಲಿಸಿದ ಕೊಡುಗೆಯನ್ನು ತಿಳಿಸಿ.

56. ನಾವು ಯಾವ ಸಂಕಲ್ಪವನ್ನು ಕೈಗೊಳ್ಳಬೇಕೆಂಬುದು ಕವಿ ಜಿ.ಎಸ್. ಶಿವರುದ್ರಪ್ಪನವರ ಆಶಯವಾಗಿದೆ ? ತಿಳಿಸಿ.

**ಅಥವಾ**

ಸಂಕಲ್ಪ ಮತ್ತು ಅನುಷ್ಠಾನ ಕುರಿತಂತೆ ಕವಿ ಜಿ.ಎಸ್. ಶಿವರುದ್ರಪ್ಪನವರ ಅಭಿಪ್ರಾಯವೇನು ? ವಿವರಿಸಿ.

**XIII. ಕೆಳಗಿನ ಗದ್ಯಭಾಗವನ್ನು ಮನಸ್ಸಿನಲ್ಲಿ ಓದಿಕೊಂಡು, ಕೊಟ್ಟಿರುವ ಪ್ರಶ್ನೆಗಳಿಗೆ ಉತ್ತರ ಬರೆಯಿರಿ :**

**1 × 4 = 4 ( 2 + 2 )**

57. ಕೆಲವು ದಿನಗಳ ತರುವಾಯ ರಂಗಣ್ಣ ಸ್ಕೂಲುಗಳ ಭೇಟಿಗೆಂದು ಹೊರಟ. ತಿಪ್ಪೇನಹಳ್ಳಿಯ ಮೇಷ್ಟ್ರು ನಿಜವಾಗಿಯೂ ರೂಲ್ಸಿಗೆ ವಿರುದ್ಧವಾಗಿ ನಡೆಯುತ್ತಿದ್ದಾನೆಯೇ? ಇನ್ನೂ ಇತರರು ಯಾರು ಹಾಗೆ ದಾಖಲೆಯಿಲ್ಲದ ಮಕ್ಕಳನ್ನು ಸೇರಿಸಿಕೊಂಡಿದ್ದಾರೆ? ನೋಡೋಣ ಎಂದು ಆಲೋಚಿಸುತ್ತ ತಿಪ್ಪೇನಹಳ್ಳಿಗೆ ಸುಮಾರು ಒಂಬತ್ತು ಗಂಟೆ ಹೊತ್ತಿಗೆ ಹೋದ. ರಂಗಣ್ಣ ಬೈಸ್ಕಲ್ಲಿಂದ ಇಳಿದು, ಅದನ್ನು ಗೋಡೆಗೆ ಒರಗಿಸಿದನು. ಮೇಷ್ಟ್ರು ವೆಂಕಣ್ಣ ಭಯದಿಂದ ನಡುಗುತ್ತ ಹೊರಕ್ಕೆ ಬಂದು ನಮಸ್ಕಾರ ಮಾಡಿದನು. ಪಾಠಶಾಲೆಯ ಗೋಡೆಗೆ ನೋಟೀಸ್ ಬೋರ್ಡ್ ಒಂದನ್ನು ತಗಲುಹಾಕಿತ್ತು. ನೋಟೀಸು ಬೋರ್ಡಿನ ಮೇಲೆ (೧) ಮಕ್ಕಳು ಸರಿಯಾದ ಹೊತ್ತಿಗೆ ಬರಬೇಕು. (೨) ಪಾಠಕಾಲದಲ್ಲಿ ಗ್ರಾಮಸ್ಥರು ಒಳಕ್ಕೆ ಬರಕೂಡದು. (೩) ದಾಖಲೆಯಿಲ್ಲದ ಮಕ್ಕಳನ್ನು ಒಳಕ್ಕೆ ಸೇರಿಸುವುದಿಲ್ಲ. (೪) ಸ್ಕೂಲಿನ ಒಪ್ಪಾರದಲ್ಲಿ ಗ್ರಾಮಸ್ಥರು ಯಾರೂ ಕುಳಿತು ಗಲಾಟೆ ಮಾಡಕೂಡದು – ಎಂದು ದಪ್ಪಕ್ಷರಗಳಲ್ಲಿ

ಬರೆದಿತ್ತು. ರಂಗಣ್ಣ ಅವುಗಳನ್ನೆಲ್ಲಾ ನೋಡಿ ತೃಪ್ತಿಪಟ್ಟುಕೊಂಡನು. "ಮೇಷ್ಟ್ರೇ! ಹಿಂದೆ ಸಾಹೇಬರು ಬಂದಾಗ ಈ ನೋಟೀಸ್ ಬೋರ್ಡನ್ನು ಇಲ್ಲಿ ಹಾಕಿರಲಿಲ್ಲವೇ?" ಎಂದು ಕೇಳಿದನು.

"ಹಾಕಿದ್ದೆ ಸ್ವಾಮಿ! ಎಲ್ಲವನ್ನೂ ಹಾಕಿದ್ದೆ! ಏನು ಹಾಕಿದ್ದರೆ ಏನು ? ನನ್ನ ಗ್ರಹಚಾರ! ತಮ್ಮ ಜುಲ್ಮಾನೆ ಆರ್ಡರು ನಿನ್ನೆ ನನ್ನ ಕೈಗೆ ತಲುಪಿತು ಸ್ವಾಮಿ! ಅದನ್ನು ನೋಡಿ ಎದೆಯೊಡೆದು ಹೋಯಿತು. ಅನ್ನ ನೀರು ಮುಟ್ಟಿದ್ದರೆ ಕೇಳಿ! ಆ ಸೂರ್ಯನಾರಾಯಣನ ಆಣೆ!" ಎಂದನು.

***ಪ್ರಶ್ನೆಗಳು:***

ಅ) ತಿಪ್ಪೇನಹಳ್ಳಿ ಪಾಠಶಾಲೆಯ ನೋಟೀಸ್ ಬೋರ್ಡಿನ ಮೇಲೆ ಏನೆಂದು ಬರೆಯಲಾಗಿತ್ತು ?

ಬ) ರಂಗಣ್ಣ ತಿಪ್ಪೇನಹಳ್ಳಿ ಶಾಲೆಗೆ ಭೇಟಿ ನೀಡಲು ಕಾರಣವೇನು ?

**XIV. ಕೆಳಗಿನ ಯಾವುದಾದರೂ ಒಂದಕ್ಕೆ ಕೊಟ್ಟಿರುವ ಮಾಹಿತಿಯನ್ನು ಆಧರಿಸಿ ಪತ್ರ ಬರೆಯಿರಿ :**

**1 × 5 = 5**

58. ನಿಮ್ಮನ್ನು ಹಾಸನದ ವಿಜಯನಗರದ ನಿವಾಸಿ 'ವಸಂತ್‌ಕುಮಾರ್' ಎಂದು ಭಾವಿಸಿಕೊಂಡು, ನಿಮ್ಮ ಪ್ರದೇಶದಲ್ಲಿ ಉಂಟಾದ ಪ್ರವಾಹದ ಪರಿಸ್ಥಿತಿಯನ್ನು ವಿವರಿಸಿ, ಪರಿಹಾರ ಕಾರ್ಯ ಕೈಗೊಳ್ಳುವಂತೆ ಕೋರಿ ಜಿಲ್ಲಾಧಿಕಾರಿಗೊಂದು ಮನವಿ ಪತ್ರವನ್ನು ಬರೆಯಿರಿ.

**ಅಥವಾ**

ನಿಮ್ಮನ್ನು ಬೆಂಗಳೂರಿನ ಸರ್ಕಾರಿ ಪ್ರೌಢಶಾಲೆಯ 'ರಕ್ಷಿತ' ಎಂದು ಭಾವಿಸಿಕೊಂಡು, ಶಾಲೆಯಲ್ಲಿ ಆಚರಿಸಿದ '75ನೇ ಸ್ವಾತಂತ್ರ್ಯದ ಅಮೃತ ಮಹೋತ್ಸವ' ಕಾರ್ಯಕ್ರಮವನ್ನು ಕುರಿತು ಮೈಸೂರಿನ ಸರ್ಕಾರಿ ಪ್ರೌಢಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ 'ಹರ್ಷಿತ' ಎಂಬ ಹೆಸರಿನ ಗೆಳತಿಗೆ ಪತ್ರವನ್ನು ಬರೆಯಿರಿ.

**XV. ಕೆಳಗಿನ ಯಾವುದಾದರೂ ಒಂದು ವಿಷಯಕ್ಕೆ ಹದಿನೈದು ವಾಕ್ಯಗಳಿಗೆ ಕಡಿಮೆಯಿಲ್ಲದಂತೆ ಪ್ರಬಂಧ ಬರೆಯಿರಿ :** **1 × 5 = 5**

59. ರಾಷ್ಟ್ರೀಯ ಭಾವೈಕ್ಯ

**ಅಥವಾ**

ಸಾಮಾಜಿಕ ಜಾಲತಾಣಗಳ ಸದ್ಬಳಕೆ